# <u>ಮಂಗಳೂರು ವಿಶ್ವವಿದ್ಯಾನಿಲಯ</u>

ದಿನಾಂಕ 25.05.2023ರಂದು ಪೂರ್ವಾಹ್ನ ಗಂಟೆ 10.00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟ್ ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2023ನೇ ಸಾಲಿನ ತೃತೀಯ ಸಾಮಾನ್ಯ ಸಭೆಯ ನಡವಳಿಗಳು.

**ಉಪಸ್ಥಿತರು:**

| **ಕ್ರ.ಸಂ.** | | | **ಸಹಿ** |
|---|---|---|---|
| 1. | ಪ್ರೊ. ಪಿ. ಸುಬ್ರಹ್ಮಣ್ಯ ಯಡಪಡಿತ್ತಾಯ<br>ಕುಲಪತಿಗಳು | ಅಧ್ಯಕ್ಷರು | |
| 2. | ಡಾ. ಗಿರಿಧರ ರಾವ್ ಎಂ.ಎಸ್.,<br>ಜಂಟಿ ನಿರ್ದೇಶಕರು<br>(ಕಾಲೇಜು ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು | |
| 3. | ಪ್ರೊ. ಕರುಣಾಕರ್ ಎ. ಕೋಟೆಗಾರ್ | ಸದಸ್ಯರು | |
| 4. | ಶ್ರೀ ರವಿಚಂದ್ರ ಪಿ. ಎಂ. | ಸದಸ್ಯರು | |
| 5. | ಪ್ರೊ. ಜಯರಾಜ್ ಅಮೀನ್<br>ಡೀನರು, ಕಲಾ ನಿಕಾಯ | ಸದಸ್ಯರು | |
| 6. | ಶ್ರೀ ಮೋಹನ್ ನಾಯ್ಕ್ | ಸದಸ್ಯರು | |
| 7. | ಡಾ. ರಾಜೇಂದ್ರ ಎಸ್. ನಾಯಕ್ | ಸದಸ್ಯರು | |
| 8. | ಶ್ರೀಮತಿ ಸಮೀರ ಕೆ.ಎ. | ಸದಸ್ಯರು | |
| 9. | ಡಾ. ಸಿಪ್ರಿಯನ್ ಮೊಂತೇರೋ<br>ಪ್ರಾಂಶುಪಾಲರು, ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ,<br>ಸಾರ್ವಜನಿಕ ಶಿಕ್ಷಣ ಆಯುಕ್ತರ ಪರವಾಗಿ | ಸದಸ್ಯರು | |
| 10. | ಪ್ರೊ. ರಾಜುಕೃಷ್ಣ ಚಲಣ್ಣವರ್<br>ಕುಲಸಚಿವರು (ಪರೀಕ್ಷಾಂಗ) | ಸದಸ್ಯರು | |
| 11. | ಪ್ರೊ. ವೈ. ಸಂಗಪ್ಪ<br>ಹಣಕಾಸು ಅಧಿಕಾರಿ (ಪ್ರಭಾರ) | ವಿಶೇಷ<br>ಆಹ್ವಾನಿತರು | |
| 12. | ಪ್ರೊ. ಕಿಶೋರ್ ಕುಮಾರ್ ಸಿ. ಕೆ.<br>ಕುಲಸಚಿವರು (ಆಡಳಿತ) | ಸದಸ್ಯ<br>ಕಾರ್ಯದರ್ಶಿ | |

**ಪ್ರಾರಂಭಿಕ**

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿದರು.

**I. ನಡವಳಿಗಳ ದೃಢೀಕರಣ**

1. ಘಟಿಕೋತ್ಸವದ ಪ್ರಯುಕ್ತ ದಿನಾಂಕ 14.03.2023ರಂದು ನಡೆದ ಸಿಂಡಿಕೇಟಿನ 2023ನೇ ಸಾಲಿನ ಪ್ರಥಮ ವಿಶೇಷ ಸಭೆಯ ನಡವಳಿಯ ದೃಢೀಕರಣ.

   - **ದೃಢೀಕರಿಸಲಾಯಿತು. –**

2. ದಿನಾಂಕ 20.03.2023ರಂದು ನಡೆದ ಸಿಂಡಿಕೇಟಿನ 2023ನೇ ಸಾಲಿನ ದ್ವಿತೀಯ ವಿಶೇಷ ಸಭೆಯ ನಡವಳಿಯ ದೃಢೀಕರಣ

   - **ದೃಢೀಕರಿಸಲಾಯಿತು. –**

**II. ಅನುಸರಣಾ ವರದಿಯ ಅನುಮೋದನೆ**

1. ದಿನಾಂಕ 31.01.2023ರಂದು ನಡೆದ ಸಿಂಡಿಕೇಟಿನ 2023ನೇ ಸಾಲಿನ ಪ್ರಥಮ ಸಾಮಾನ್ಯ ಸಭೆಯ ಅನುಸರಣಾ ವರದಿಯ ಅನುಮೋದನೆ.

   - **ಅನುಮೋದಿಸಲಾಯಿತು**. -

2. ದಿನಾಂಕ 27.02.2023ರಂದು ನಡೆದ ಸಿಂಡಿಕೇಟಿನ 2023ನೇ ಸಾಲಿನ ದ್ವಿತೀಯ ಸಾಮಾನ್ಯ ಸಭೆಯ ಅನುಸರಣಾ ವರದಿಯ ಅನುಮೋದನೆ.

   - **ಅನುಮೋದಿಸಲಾಯಿತು**. -

**ಪ್ರಸ್ತಾವನೆ:**

**ಸರ್ಕಾರದ ಪತ್ರ ಸಂಖ್ಯೆ:ಇಡಿ14 ಯುಡಿಎಸ್ 2022 ದಿನಾಂಕ 18.01.2023 ಪತ್ರದಲ್ಲಿ ತಿಳಿಸಿರುವಂತೆ "Statute Governing Rules of Business of the Syndicate, The Academic Council, The Finance Committee and the Faculties" ಗೆ ಸಂಬಂಧಿಸಿ, ಸಿಂಡಿಕೇಟು ಸಭೆಗಳನ್ನು ನಡೆಸುವ ಬಗ್ಗೆ ಘನತೆವೆತ್ತ ರಾಜ್ಯಪಾಲರ ಕಛೇರಿಯಿಂದ ಸ್ವೀಕೃತವಾಗಿರುವ ಮಾರ್ಗಸೂಚಿ (Guidelines) ಗಳಲ್ಲಿನ ಕ್ರಮ ಸಂಖ್ಯೆ 10ರಲ್ಲಿನ ಅಂಶವನ್ನು ಕೈಬಿಟ್ಟು ಉಳಿದಂತೆ ಎಲ್ಲಾ ಅಂಶಗಳನ್ನು ಅಳವಡಿಸಿಕೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. ತತ್ಸಂಬಂಧ ಅಗತ್ಯ ಕ್ರಮಕೈಗೊಳ್ಳಬಹುದೆಂಬುದಾಗಿಯೂ ಸಿಂಡಿಕೇಟು ನಿರ್ಣಯಿಸಿತು.**

**III. ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು.**

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಎಸಿಸಿ :ಸಾ.ಸ.3:1(2023) |
| ವಿಷಯ: | ಶ್ರೀ ದುರ್ಗಾಪರಮೇಶ್ವರೀ ದೇವಳ ಪ್ರಥಮ ದರ್ಜೆ ಕಾಲೇಜು, ಕಟೀಲು ಇಲ್ಲಿರುವ ಸ್ನಾತಕೋತ್ತರ ಸಂಸ್ಕೃತ ವಿಭಾಗವನ್ನು ಪಿಹೆಚ್.ಡಿ. ವ್ಯಾಸಂಗದ ಸಂಶೋಧನಾ ಕೇಂದ್ರವನ್ನಾಗಿ ಮಾನ್ಯತೆ ನೀಡುವ ಬಗ್ಗೆ. |
| ನಿರ್ಣಯ: | ಅನುಮೋದಿಸಲಾಯಿತು. |

**ಕಾರ್ಯಸೂಚಿ ಸಂಖ್ಯೆ:** ಎಸಿಸಿ : ಸಾ.ಸ.3:2(2023)

ವಿಷಯ: ಶೈಕ್ಷಣಿಕ ವರ್ಷ 2023-24ನೇ ಸಾಲಿಗೆ ವಿವಿಧ ಶುಲ್ಕಗಳನ್ನು ನಿಗದಿಪಡಿಸುವ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಪರಿಶೀಲಿಸಿ, ಶುಲ್ಕ ಪರಿಷ್ಕರಣಾ ಶುಲ್ಕದ ನಡವಳಿಯಲ್ಲಿ ಕ್ರಮ ಸಂಖ್ಯೆ 2 ನಮೂದಿಸಿದ Post Doctoral ಫೆಲೋ ಮತ್ತು ಕ್ರಮ ಸಂಖ್ಯೆ 3 ಕ್ಕೆ ಸಂಬಂಧಿಸಿದ ಶುಲ್ಕವನ್ನು ಮರುಪರಿಶೀಲಿಸಿ ಅಳವಡಿಸಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಉಳಿದಂತೆ, ಶುಲ್ಕ ಪರಿಷ್ಕರಣಾ ಸಮಿತಿಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ : ಸಾ.ಸ.3:3(2023)

ವಿಷಯ: 41ನೇ ಘಟಿಕೋತ್ಸವ ಕಾರ್ಯಕ್ರಮದ ಪ್ರಯುಕ್ತ ತಗಲಿದ ಭೋಜನ ವೆಚ್ಚದ ಬಿಲ್ಲು ಪಾವತಿ ಬಗ್ಗೆ.

ನಿರ್ಣಯ: ಘಟನೋತ್ತರವಾಗಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಎಸಿಸಿ : ಸಾ.ಸ.3:4(2023)

ವಿಷಯ: ಶೈಕ್ಷಣಿಕ ವರ್ಷ 2022-23ನೇ ಸಾಲಿನಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ವಿಭಾಗಗಳಲ್ಲಿ ವಿಶ್ವವಿದ್ಯಾನಿಲಯ ಘಟಕ ಕಾಲೇಜುಗಳಲ್ಲಿ ಮತ್ತು ಜ್ಞಾನಕಾವೇರಿ ಸ್ನಾತಕೋತ್ತರ ಕೇಂದ್ರ ಚಿಕ್ಕ ಅಳುವಾರ ಇಲ್ಲಿ ನಡೆಸಲ್ಪಡುವ ಸ್ನಾತಕೋತ್ತರ ಕಾರ್ಯಕ್ರಮಗಳಿಗೆ ವಿದ್ಯಾರ್ಥಿ ಪರಿಮಿತಿಯನ್ನು ನಿಗದಿಪಡಿಸುವ ಬಗ್ಗೆ.

ನಿರ್ಣಯ: ಘಟನೋತ್ತರವಾಗಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ : ಸಾ.ಸ.3:5 (2023)

ವಿಷಯ: ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮಕ್ಕೆ ಸಂಯೋಜನಾಧಿಕಾರಿ ನೇಮಕಾತಿ ಆಯ್ಕೆ ಮಂಡಳಿಯ ಶಿಫಾರಸ್ಸಿನ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ವಿಧಾನ ಸಭಾ ಚುನಾವಣೆ - 2023 ರ ನೀತಿ ಸಂಹಿತೆ ಜಾರಿಯಾದ ದಿನಾಂಕದಂದೇ ಆಯ್ಕೆ ಮಂಡಳಿ ಸಭೆಯು ನಡೆದಿರುವುದರಿಂದ ಪ್ರಕ್ರಿಯೆಯನ್ನು ಅಸಿಂಧುವೆಂದು ಸಿಂಡಿಕೇಟು ಪರಿಗಣಿಸಿತು. ಮುಂದುವರಿದು, ಸಂಯೋಜನಾಧಿಕಾರಿ ನೇಮಕಾತಿಗೆ ಸಂಬಂಧಿಸಿ, ಮಗದೊಮ್ಮೆ ಅರ್ಜಿಗಳನ್ನು ಆಹ್ವಾನಿಸಿ, ಈಗಾಗಲೇ ಸ್ವೀಕೃತವಾಗಿರುವ ಅರ್ಜಿಗಳನ್ನೊಳಗೊಂಡು ಪುನಃ ಸಂದರ್ಶನ ನಡೆಸಿ, ಸಿಂಡಿಕೇಟು ಸಭೆಗೆ ಪ್ರಸ್ತಾವನೆಯನ್ನು ಮಂಡಿಸಲು ಸೂಕ್ತ ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಸಾ.ಸ.3:6 (2023)

ವಿಷಯ: ಡಾ. ಬಿ.ಆರ್. ಮಂಜುನಾಥ, ಪ್ರಾಧ್ಯಾಪಕರು, ಸಾಗರ ಭೂವಿಜ್ಞಾನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರಿಗೆ CITTA UNIVERSITARIA, Piazzale Aldo Moro 5, Roma, Rome Italy ಇಲ್ಲಿ ಅಂತರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸಲು ಅನುಮತಿ ನೀಡುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ :ಸಾ.ಸ.3:7 (2023)

ವಿಷಯ: ಯುಜಿಸಿ ನಿಯಮಾವಳಿ 2018ರ ಪ್ರಕಾರ ಕೆರಿಯರ್ ಅಡ್ವಾನ್ಸ್‌ಮೆಂಟ್ ಸ್ಕೀಂನಡಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯ / ಸ್ನಾತಕೋತ್ತರ ಕೇಂದ್ರ / ಘಟಕ ಕಾಲೇಜುಗಳ ಬೋಧಕರಿಗೆ ವೃತ್ತಿ ಪದೋನ್ನತಿ - ಸ್ಕ್ರೀನಿಂಗ್-ಕಂ-ಇವ್ಯಾಲ್ಯುವೇಶನ್/ಆಯ್ಕೆ ಸಮಿತಿಯ ಶಿಫಾರಸ್ಸುಗಳನ್ನು ಅನುಮೋದಿಸುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ : ಸಾ.ಸ.3:8 (2023)

ವಿಷಯ: ನ್ಯಾಕ್ ಮಾರ್ಗಸೂಚಿಯನುಸಾರ 2021-22ರ Annual Quality Assurance Report (AQAR) ಅನುಮೋದನೆ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ :ಸಾ.ಸ.3:9 (2023)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ "Rukmini Subbanna Shetty Memorial Sudhakar Shetty Gold Medal" to Top Scorer in Post Graduate Course in Industrial Chemistry ಚಿನ್ನದ ಪದಕ ಪ್ರದಾನ ಮಾಡುವ ಬಗ್ಗೆ.

ನಿರ್ಣಯ: ಘಟನೋತ್ತರವಾಗಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಾರ್ವತ್ರಿಕ : ಸಾ.ಸ.3:10 (2023)

ವಿಷಯ: ತರಂಗ ಶಿಕ್ಷಣ ದೀಪಿಕ - 2023 ವಿಶೇಷ ಪುಸ್ತಕದಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಕುರಿತು ಜಾಹೀರಾತು ಪ್ರಕಟಿಸಿರುವುದಕ್ಕೆ ವಿಶ್ವವಿದ್ಯಾನಿಲಯದಿಂದ ಅನುಮತಿ ನೀಡುವ ಬಗ್ಗೆ.

ನಿರ್ಣಯ: ಘಟನೋತ್ತರವಾಗಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಾರ್ವತ್ರಿಕ : ಸಾ.ಸ.3:11 (2023)

ವಿಷಯ: ಭಾರತೀಯ ಯುವ ರೆಡ್‌ಕ್ರಾಸ್ ಘಟಕಕ್ಕೆ ಮಂಗಳೂರು ವಿಶ್ವವಿದ್ಯಾನಿಲಯದಿಂದ ನೋಡೆಲ್ ಅಧಿಕಾರಿಯವರನ್ನು ನೇಮಿಸುವ ಬಗ್ಗೆ.

ನಿರ್ಣಯ: ಡಾ. ಗಾಯತ್ರಿ, ಸಹಾಯಕ ಪ್ರಾಧ್ಯಾಪಕರು, ಸಮಾಜಶಾಸ್ತ್ರ ವಿಭಾಗ, ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇವರನ್ನು ಭಾರತೀಯ ಯುವ ರೆಡ್ ಕ್ರಾಸ್ ಘಟಕಕ್ಕೆ ಮಂಗಳೂರು ವಿಶ್ವವಿದ್ಯಾನಿಲಯದಿಂದ ನೋಡೆಲ್ ಅಧಿಕಾರಿಯನ್ನಾಗಿ ನೇಮಕ ಮಾಡಲಾಯಿತು.

ಪ್ರಸ್ತುತ ಭಾರತೀಯ ಯುವ ರೆಡ್‌ಕ್ರಾಸ್ ಘಟಕದ ನೋಡೆಲ್ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿರುವ ಡಾ. ಗಣಪತಿ ಗೌಡ, ಪ್ರಾಧ್ಯಾಪಕರು, ಇತಿಹಾಸ ವಿಭಾಗ, ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇವರು ಸದರಿಯವರಿಗೆ ವಹಿಸಿದ ಜವಾಬ್ದಾರಿಯನ್ನು ಅತ್ಯಂತ ಅಚ್ಚುಕಟ್ಟಾಗಿ ನಿರ್ವಹಿಸಿರುವುದಕ್ಕೆ ಸಿಂಡಿಕೇಟು ಸದರಿಯವರನ್ನು ಅಭಿನಂದಿಸಿತು. ಮುಂದುವರಿದು, ಸದರಿಯವರ ಅವಧಿಯಲ್ಲಿ ವಿಶ್ವವಿದ್ಯಾನಿಲಯಕ್ಕೆ ರಾಜ್ಯಮಟ್ಟದ ಪ್ರಶಸ್ತಿ ಲಭಿಸಿರುವುದಕ್ಕೆ ವಿಶೇಷ ಅಭಿನಂದನೆಗಳನ್ನು ಸಲ್ಲಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಆಡಳಿತ : ಸಾ.ಸ.3:12 (2023)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಆಂತರಿಕ ಲೆಕ್ಕ ಪರಿಶೋಧನೆ ಹಾಗೂ Double Entry System of Accounting ನ್ನು ಅಳವಡಿಸುವ ಬಗ್ಗೆ.

ನಿರ್ಣಯ: ಘಟನೋತ್ತರವಾಗಿ ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು : ಸಾ.ಸ.3:13 (2023)

ವಿಷಯ: ಸ್ನಾತಕೋತ್ತರ ಮತ್ತು ಪದವಿ ಮಟ್ಟದ ಕೊಡವ ಸಂಯುಕ್ತ ಅಧ್ಯಯನ ಮಂಡಳಿಯ ರಚನೆ ಬಗ್ಗೆ.

ನಿರ್ಣಯ: ಸ್ನಾತಕೋತ್ತರ ಮತ್ತು ಪದವಿ ಮಟ್ಟದ ಕೊಡವ ಸಂಯುಕ್ತ ಅಧ್ಯಯನ ಮಂಡಳಿಯನ್ನು ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು : ಸಾ.ಸ.3:14 (2023)

ವಿಷಯ: ಪದವಿ ಮತ್ತು ಸ್ನಾತಕೋತ್ತರ ಕೊಂಕಣಿ ಸಂಯುಕ್ತ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.

ನಿರ್ಣಯ: ಪದವಿ ಮತ್ತು ಸ್ನಾತಕೋತ್ತರ ಕೊಂಕಣಿ ಸಂಯುಕ್ತ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು : ಸಾ.ಸ.3:15 (2023)

ವಿಷಯ: ಪದವಿ ಮಟ್ಟದ ಸೆಕ್ರೆಟೇರಿಯಲ್ ಪ್ರಾಕ್ಟೀಸ್ ಮತ್ತು ಆಫೀಸ್ ಮ್ಯಾನೇಜ್‌ಮೆಂಟ್ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಬಗ್ಗೆ.

ನಿರ್ಣಯ: ಪದವಿ ಮಟ್ಟದ ಸೆಕ್ರೆಟೇರಿಯಲ್ ಪ್ರಾಕ್ಟೀಸ್ ಮತ್ತು ಆಫೀಸ್ ಮ್ಯಾನೇಜ್‌ಮೆಂಟ್ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು :ಸಾ.ಸ.3:16 (2023)

ವಿಷಯ: ಪದವಿ ಮಟ್ಟದ ಹೊಟೇಲ್ ಮ್ಯಾನೇಜ್‌ಮೆಂಟ್ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಬಗ್ಗೆ.

ನಿರ್ಣಯ: ಪದವಿ ಮಟ್ಟದ ಹೊಟೇಲ್ ಮ್ಯಾನೇಜ್‌ಮೆಂಟ್ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು : ಸಾ.ಸ.3:17 (2023)

ವಿಷಯ: ಪದವಿ ಮಟ್ಟದ ವ್ಯವಹಾರ ಆಡಳಿತ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಬಗ್ಗೆ.

ನಿರ್ಣಯ: ಪದವಿ ಮಟ್ಟದ ವ್ಯವಹಾರ ಆಡಳಿತ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಂಡಿಕೇಟು :ಸಾ.ಸ.3:18 (2023)

ವಿಷಯ: ಸ್ಪೀಚ್ ಲ್ಯಾಂಗ್ವೇಜ್ ಮತ್ತು ಹಿಯರಿಂಗ್ ಸಂಯುಕ್ತ ಅಧ್ಯಯನ ಮಂಡಳಿಯನ್ನು BASLP (Bachelor in Audiology and Speech Language Pathology) ಎಂದು ಮರುನಾಮಕರಣಗೊಳಿಸಿ, ರಚಿಸುವ ಬಗ್ಗೆ.

ನಿರ್ಣಯ: ಸ್ಪೀಚ್ ಲ್ಯಾಂಗ್ವೇಜ್ ಮತ್ತು ಹಿಯರಿಂಗ್ ಸಂಯುಕ್ತ ಅಧ್ಯಯನ ಮಂಡಳಿಯನ್ನು BASLP (Bachelor in Audiology and Speech Language Pathology) ಎಂದು ಮರುನಾಮಕರಣಗೊಳಿಸುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

ಮುಂದುವರಿದು, ಸದರಿ ಅಧ್ಯಯನ ಮಂಡಳಿಯನ್ನು ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಪ.ಜಾ.ಪ.ಪಂ.ಘಟಕ:ಸಾ.ಸ.3:19 (2023)

ವಿಷಯ: ಬಸಪ್ಪ ಹರಿಜನ, ಸಂಶೋಧನಾ ವಿದ್ಯಾರ್ಥಿ, ಭೌತಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರಿಗೆ ವಿದೇಶದಲ್ಲಿ ಭಾಗವಹಿಸಲು ಅನುಮತಿ ಹಾಗೂ ಮುಂಗಡ ಮೊತ್ತ ಪಾವತಿಸಿರುವುದಕ್ಕೆ ಘಟನೋತ್ತರ ಮಂಜೂರಾತಿ ನೀಡುವ ಬಗ್ಗೆ.

ನಿರ್ಣಯ: ಬಸಪ್ಪ ಹರಿಜನ, ಸಂಶೋಧನಾ ವಿದ್ಯಾರ್ಥಿ, ಭೌತಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರಿಗೆ ಸಿಂಗಾಪುರದಲ್ಲಿ ನಡೆಯಲಿರುವ Interfnational Conference ನಲ್ಲಿ ಭಾಗವಹಿಸಲು ಅನುಮತಿ ಹಾಗೂ ತತ್ಸಂಬಂಧ ಪಾವತಿಸಿರುವ

ಮುಂಗಡ ಮೊತ್ತ ರೂ.1,72,500.00 (ರೂಪಾಯಿ ಒಂದು ಲಕ್ಷದ ಎಪ್ಪತ್ತೆರಡು ಸಾವಿರದ ಐದು ನೂರು ಮಾತ್ರ)ಕ್ಕೆ ಘಟನೋತ್ತರ ಮಂಜೂರಾತಿ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಪ.ಜಾ.ಪ.ಪಂ.ಘಟಕ:ಸಾ.ಸ.3:20 (2023)

ವಿಷಯ: ಶ್ರೀ ಚೇತನ್ ಜಿ., ಭೌತಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರು ವಿದೇಶದಲ್ಲಿ ನಡೆದ ಅಂತರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸಿದ ಖರ್ಚು ವೆಚ್ಚಗಳ ಪಾವತಿಗೆ ಮಂಜೂರಾತಿ ನೀಡುವ ಬಗ್ಗೆ.

ನಿರ್ಣಯ: ಶ್ರೀ ಚೇತನ್ ಜಿ., ಭೌತಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರಿಗೆ ಸಿಂಗಾಪುರದಲ್ಲಿ ನಡೆದ ಅಂತರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸಿದ ಬಗ್ಗೆ ತಗಲಿರುವ ವೆಚ್ಚ ರೂ.2,20,609.00 (ರೂಪಾಯಿ ಎರಡು ಲಕ್ಷದ ಇಪ್ಪತ್ತು ಸಾವಿರದ ಆರು ನೂರ ಒಂಬತ್ತು ಮಾತ್ರ) ಕ್ಕೆ ಮಂಜೂರಾತಿ ನೀಡಲಾಯಿತು.

ಕಾರ್ಯಸೂಚಿ ಸಂಖ್ಯೆ: ಪರೀಕ್ಷಾಂಗ :ಸಾ.ಸ.3:21 (2023)

ವಿಷಯ: ಎಪ್ರಿಲ್/ಮೇ 2022ರಲ್ಲಿ ಜರುಗಿದ ವಿಶ್ವವಿದ್ಯಾನಿಲಯದ ವಿವಿಧ ಪದವಿ / ಸ್ನಾತಕೋತ್ತರ ಪರೀಕ್ಷೆಗಳಲ್ಲಿ ವಿದ್ಯಾರ್ಥಿಗಳು ನಡೆಸಿದ ಅವ್ಯವಹಾರಗಳು - ದಂಡನೆಯನ್ನು ದೃಢಪಡಿಸುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಪರೀಕ್ಷಾಂಗ : ಸಾ.ಸ.3:22 (2023)

ವಿಷಯ: ಸೆಪ್ಟೆಂಬರ್/ಅಕ್ಟೋಬರ್ 2022ನೇ ಸಾಲಿನಲ್ಲಿ ಬಿ.ಬಿ.ಎ. ಕೋರ್ಸಿನ ರಾಷ್ಟ್ರೀಯ ಶಿಕ್ಷಣ ನೀತಿ 2020ರನ್ವಯ BBAKALN201 ಕನ್ನಡ ಪ್ರಶ್ನೆ ಪತ್ರಿಕೆಯಲ್ಲಿ ಉಂಟಾದ ಲೋಪಗಳ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಪರೀಕ್ಷೆಗೆ ತಗಲಿದ ವೆಚ್ಚವನ್ನು ಸಂಬಂಧಿತರಿಂದ ವಸೂಲು ಮಾಡಲು ಕ್ರಮಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಕಾರ್ಯಸೂಚಿ ಸಂಖ್ಯೆ: ಆಡಳಿತ : ಸಾ.ಸ.3:23 (2023)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ವಿವಿಧ ವಿಭಾಗಗಳು / ಕಛೇರಿಗಳಲ್ಲಿ ಅಳವಡಿಸಲಾಗಿರುವ ಕಂಪ್ಯೂಟರ್ / ಪ್ರಿಂಟರ್‌ಗಳ ವಾರ್ಷಿಕ ನಿರ್ವಹಣೆಯ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ವಾರ್ಷಿಕ ನಿರ್ವಹಣಾ ವೆಚ್ಚ ರೂ.7,89,799.00(ರೂಪಾಯಿ ಏಳು ಲಕ್ಷದ ಎಂಬತ್ತೊಂಬತ್ತು ಸಾವಿರದ ಏಳು ನೂರ ತೊಂಬತ್ತೊಂಬತ್ತು ಮಾತ್ರ)ಕ್ಕೆ ಅನುಮೋದನೆ ನೀಡಲಾಯಿತು.

ಮುಂದುವರಿದು, ತಪ್ಪು ಮಾಹಿತಿ ನೀಡಿರುವ ವಿಭಾಗದ ಸಂಬಂಧಿತರಿಗೆ ಈ ಬಗ್ಗೆ ತಿಳುವಳಿಕೆ ಪತ್ರ ನೀಡಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ : ಸಾ.ಸ.3:24 (2023)

ವಿಷಯ: DRAFT STATUTES RELATING TO APPOINTMENT AND PROMOTION OF TEACHERS AND OTHER ACADEMIC STAFF AND MEASURES FOR THE MAINTENANCE OF STANDARDS IN HIGHER EDUCATION IN THE MANGALORE UNIVERSITY, AS PER THE UGC REGULATIONS, 2018ನ್ನು ಅನುಮೋದಿಸುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಡಿಇವಿ : ಸಾ.ಸ.3:25 (2023)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಆವರಣದಲ್ಲಿರುವ ಬ್ಯಾಂಕ್ ಆಫ್ ಬರೋಡ ಬ್ಯಾಂಕ್ ಕಟ್ಟಡಕ್ಕೆ ಪರವಾನಿಗೆ ಶುಲ್ಕ (ಅನ್ವಯವಾಗುವ ತೆರಿಗೆ ಸೇರಿ) ಮತ್ತು ಅವಧಿ ನಿಗದಿಪಡಿಸುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

ಮುಂದುವರಿದು, ಪ್ರತಿ ವರ್ಷಕ್ಕೆ ಶೇಕಡಾ 10 ಬಾಡಿಗೆಯನ್ನು ಹೆಚ್ಚಿಸಲು ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಕಾರ್ಯಸೂಚಿ ಸಂಖ್ಯೆ: ಕಾನೂನು ಘಟಕ : ಸಾ.ಸ.3:26 (2023)

ವಿಷಯ: ಕೇರಳದ ವಿಶ್ವವಿದ್ಯಾನಿಲಯ ಕ್ರೈಸ್ಟ್ ನಗರ್ ಕಾಲೇಜು ತ್ರಿವೇಂಡ್ರಮ್ ಇಲ್ಲಿ ಬಿ.ಎಸ್ಸಿ. ಪ್ರಥಮ ವರ್ಷದ ವ್ಯಾಸಂಗವನ್ನು 2019-20ನೇ ಸಾಲಿನಲ್ಲಿ ಪೂರೈಸಿರುವ ಶ್ರೀ ಗಣೇಶ್ ಎನ್. ಸಾಯಿ ಎಂಬ ವಿದ್ಯಾರ್ಥಿಯು ಬಿ.ಎಸ್ಸಿ. ದ್ವಿತೀಯ ವರ್ಷದ ತೃತೀಯ ಸೆಮಿಸ್ಟರ್‌ಗೆ ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜನೆಗೆ ಒಳಪಟ್ಟ ಸ್ವಾಯತ್ತ ಕಾಲೇಜು ಆಗಿರುವ ಸಂತ ಅಲೋಷಿಯಸ್ ಕಾಲೇಜು, ಮಂಗಳೂರು ಇಲ್ಲಿ ವ್ಯಾಸಂಗ ಮಾಡುತ್ತಿದ್ದು ಸದರಿ ಕೇರಳ ವಿಶ್ವವಿದ್ಯಾನಿಲಯದಿಂದ ಮಂಗಳೂರಿನ ಕಾಲೇಜಿಗೆ ವರ್ಗಾವಣೆ ಪ್ರವೇಶಾನುಮತಿ ಕೋರಿ ಈ ಬಗ್ಗೆ ಸೂಕ್ತ ನಿರ್ದೇಶನ ನೀಡುವಂತೆ ಮಾನ್ಯ ಕರ್ನಾಟಕ ರಾಜ್ಯ ಉ ಚ್ಛ ನ್ಯಾಯಾಲಯದಲ್ಲಿ ಹೂಡಿದ್ದ ರಿಟ್ ಅರ್ಜಿ ಸಂ. 22575/2021(S-RES)ಯ ಅಂತಿಮ ಆದೇಶದ ತೀರ್ಪನ್ನು ಪುನರ್ ವಿಮರ್ಶಿಸುವಂತೆ ಕೋರಿ ಸದರಿ ಶ್ರೀ ಗಣೇಶ್ ಎನ್. ಸಾಯಿ ಇವರು ಹೂಡಿರುವ R.P: 866/2022ರಲ್ಲಿ ಸಲ್ಲಿಸಿರುವ ಆಕ್ಷೇಪಣಾ ಹೇಳಿಕೆಗಳನ್ನು ಘಟನೋತ್ತರ ಅನುಮೋದನೆ ಬಗ್ಗೆ.

ನಿರ್ಣಯ: ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ : ಸಾ.ಸ.3:27 (2023)

ವಿಷಯ: ಪರೀಕ್ಷಾಂಗ ವಿಭಾಗದ Workstation/Computer and Laptop ಖರೀದಿ ಬಗ್ಗೆ.

ನಿರ್ಣಯ: ಪ್ರಸ್ತಾವನೆಯಲ್ಲಿ ನಮೂದಿಸಿರುವ Laptop ಬದಲು Desktopಗಳನ್ನು ಮರು ಟೆಂಡರು ಪ್ರಕ್ರಿಯೆ ಮೂಲಕ ಖರೀದಿ ಮಾಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ : ಸಾ.ಸ.3:28 (2023)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದ ಸಾಗರ ಭೂವಿಜ್ಞಾನ ವಿಭಾಗದಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ ಕಾರ್ಯನಿರ್ವಹಿಸುತ್ತಿರುವ ಡಾ. ನಿರ್ಮಲ ಆರ್. ಇವರಿಗೆ ಮೈಸೂರು ವಿಶ್ವವಿದ್ಯಾನಿಲಯದ ಭೂವಿಜ್ಞಾನ ಅಧ್ಯಯನ ವಿಭಾಗದಲ್ಲಿ ಖಾಲಿಯಿರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ವರ್ಗಾಯಿಸುವ ಕುರಿತು ನಿರಾಕ್ಷೇಪಣಾ ಪತ್ರ ನೀಡುವ ಬಗ್ಗೆ.

ನಿರ್ಣಯ: ಹುದ್ದೆ ರಹಿತವಾಗಿ ನಿರಾಕ್ಷೇಪಣಾ ಪತ್ರ ನೀಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ : ಸಾ.ಸ.3:29 (2023)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಮತ್ತು Manipal Academy of Higher Education, Manipal ಇವರೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪ್ರಸ್ತಾವನೆಯ ಅನುಮೋದನೆ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ : ಸಾ.ಸ.3:30 (2023)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಮತ್ತು ಮಣಿಪಾಲ್ ಕಾಲೇಜ್ ಆಫ್ ಡೆಂಟಲ್ ಸೈನ್ಸ್, ಮಂಗಳೂರು ಇವರೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪ್ರಸ್ತಾವನೆಯ ಅನುಮೋದನೆ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ :ಸಾ.ಸ.3:31 (2023)

ವಿಷಯ: ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಕಾಲೇಜು (ಸ್ವಾಯತ್ತ), ಉಜಿರೆ ಇಲ್ಲಿ ಶೈಕ್ಷಣಿಕ ವರ್ಷ 2023-24ನೇ ಸಾಲಿನಿಂದ ಬಿ.ಸಿ.ಎ. ಕಾರ್ಯಕ್ರಮಕ್ಕೆ 80 ವಿದ್ಯಾರ್ಥಿ ಪರಿಮಿತಿಯೊಂದಿಗೆ ಹೆಚ್ಚುವರಿ ವಿಭಾಗವನ್ನು (ಸ್ವಾಯತ್ತ ಸ್ಥಾನಮಾನದೊಂದಿಗೆ) ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಎಸಿಸಿ : ಸಾ.ಸ.3:32 (2023) |
| ವಿಷಯ: | ಸಂತ ಅಲೋಶಿಯಸ್ ಕಾಲೇಜು (ಸ್ವಾಯತ್ತ), ಮಂಗಳೂರು ಇಲ್ಲಿ ಶೈಕ್ಷಣಿಕ ವರ್ಷ 2023-24ನೇ ಸಾಲಿನಿಂದ ಬಿ.ಸಿ.ಎ. ಕಾರ್ಯಕ್ರಮಕ್ಕೆ 80 ವಿದ್ಯಾರ್ಥಿ ಪರಿಮಿತಿಯೊಂದಿಗೆ ಹೆಚ್ಚುವರಿ ವಿಭಾಗವನ್ನು (ಸ್ವಾಯತ್ತ ಸ್ಥಾನಮಾನದೊಂದಿಗೆ) ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ. |
| ನಿರ್ಣಯ: | ಅನುಮೋದಿಸಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಎಸಿಸಿ : ಸಾ.ಸ.3:33 (2023) |
| ವಿಷಯ: | ಸಂತ ಅಲೋಶಿಯಸ್ ಕಾಲೇಜು (ಸ್ವಾಯತ್ತ), ಮಂಗಳೂರು ಇಲ್ಲಿ ಶೈಕ್ಷಣಿಕ ವರ್ಷ 2023-24ನೇ ಸಾಲಿನಿಂದ ಬಿ.ಬಿ.ಎ. ಕಾರ್ಯಕ್ರಮಕ್ಕೆ 80 ವಿದ್ಯಾರ್ಥಿ ಪರಿಮಿತಿಯೊಂದಿಗೆ ಹೆಚ್ಚುವರಿ ವಿಭಾಗವನ್ನು (ಸ್ವಾಯತ್ತ ಸ್ಥಾನಮಾನದೊಂದಿಗೆ) ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ. |
| ನಿರ್ಣಯ: | ಅನುಮೋದಿಸಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಸಾರ್ವತ್ರಿಕ : ಸಾ.ಸ.3:34 (2023) |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯ ಅಂತರಾಷ್ಟ್ರೀಯ ವಿದ್ಯಾರ್ಥಿಗಳು ವಾಸ್ತವ್ಯವಿರುವ ಎ.ಎಸ್.ಕೆ. ಟವರ್ಸ್, ನಾಟೆಕಲ್ ಇಲ್ಲಿಯ ಬಾಡಿಗೆ ಪಡೆಯಲಾದ ಫ್ಲಾಟ್‌ಗಳ ಕರಾರು ಒಪ್ಪಂದದ ಅವಧಿಯನ್ನು ಮುಂದುವರಿಸುವ ಬಗ್ಗೆ. |
| ನಿರ್ಣಯ: | ಪ್ರಸ್ತಾನೆಯಲ್ಲಿ ನಮೂದಿಸಿರುವ ಬಾಡಿಗೆ ದರವನ್ನು ಶೇಕಡಾ 5 ಕ್ಕೆ ಸೀಮಿತಗೊಳಿಸಿ, ಪ್ರಸ್ತಾವನೆಯನ್ನು ಅನುಮೋದಿಸಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಸಾರ್ವತ್ರಿಕ : ಸಾ.ಸ.3:35 (2023) |
| ವಿಷಯ: | ಮಂಗಳೂರು ವಿಶ್ವವಿದ್ಯಾನಿಲಯದ ಆವರಣ, ಮಂಗಳಗಂಗೋತ್ರಿ, ಘಟಕ ಕಾಲೇಜುಗಳು ಹಾಗೂ ಸ್ನಾತಕೋತ್ತರ ಕೇಂದ್ರ, ಜ್ಞಾನ ಕಾವೇರಿ, ಚಿಕ್ಕ-ಅಳುವಾರ ಇಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಭದ್ರತಾ, ಶುಚಿತ್ವ, ತೋಟಗಾರಿಕಾ ಹಾಗೂ 'ಡಿ' ಗ್ರೂಪ್ ಸಿಬ್ಬಂದಿಗಳ ಸೇವೆಯ ಗುತ್ತಿಗೆಯನ್ನು ವಹಿಸಿಕೊಂಡಿರುವ ಶ್ರೀ ರಂಗನಾಥ ಎಂಟರ್‌ಪ್ರೈಸಸ್, ಮೈಸೂರು ಸಂಸ್ಥೆಯ ಗುತ್ತಿಗೆ ಅವಧಿಯನ್ನು ವಿಸ್ತರಣೆ ಮಾಡುವ ಬಗ್ಗೆ. |
| ನಿರ್ಣಯ: | ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಸದರಿ ವಿಷಯಕ್ಕೆ ಸಂಬಂಧಿಸಿ ಮಾನ್ಯ ಉಚ್ಛ ನ್ಯಾಯಾಲಯದಲ್ಲಿ ಹೂಡಿರುವ ರಿಟ್ ಅರ್ಜಿಯನ್ವಯ ಸ್ವೀಕೃತವಾಗಿರುವ ನ್ಯಾಯಾಲಯದ ತಡೆಯಾಜ್ಞೆಯನ್ನು ತೆರವುಗೊಳಿಸಲು ಶೀಘ್ರದಲ್ಲಿ ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. |

ಅಲ್ಲಿಯವರೆಗೆ ಶ್ರೀ ರಂಗನಾಥ ಎಂಟರ್‌ಪ್ರೈಸಸ್, ಮೈಸೂರು ಸಂಸ್ಥೆಯ ಗುತ್ತಿಗೆ ಅವಧಿಯನ್ನು ಈ ಹಿಂದಿನ ದರ ಮತ್ತು ಷರತ್ತಿನೊಂದಿಗೆ ಮುಂದುವರಿಸಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ : ಸಾ.ಸ.3:36 (2023)

ವಿಷಯ: 2022-23ನೇ ಸಾಲಿನ ಮಂಗಳೂರು ವಿಶ್ವವಿದ್ಯಾನಿಲಯದ ಅಂತರ್ ವಿಶ್ವವಿದ್ಯಾನಿಲಯ ಕ್ರೀಡಾ ಚಟುವಟಿಕೆಗಳಿಗೆ ಟ್ರ್ಯಾಕ್ ಸೂಟ್‌ಗಳನ್ನು ಖರೀದಿಸುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು : ಸಾ.ಸ.3:37 (2023)

ವಿಷಯ: ಪದವಿ ಮತ್ತು ಸ್ನಾತಕೋತ್ತರ ಶಾರೀರಿಕ ಶಿಕ್ಷಣ ಮತ್ತು ಕ್ರೀಡಾ ಸಂಯುಕ್ತ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.

ನಿರ್ಣಯ: ಪದವಿ ಮತ್ತು ಸ್ನಾತಕೋತ್ತರ ಶಾರೀರಿಕ ಶಿಕ್ಷಣ ಮತ್ತು ಕ್ರೀಡಾ ಸಂಯುಕ್ತ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ : ಸಾ.ಸ.3:38 (2023)

ವಿಷಯ: ಪಿಹೆಚ್.ಡಿ. ಪದವಿ ಪಡೆದಿರುವುದಕ್ಕೆ ಮುಂಗಡ ವೇತನ ಭಡ್ತಿ ಮಂಜೂರು ಮಾಡುವ ಬಗ್ಗೆ ಇರುವ ಗೊಂದಲಗಳನ್ನು ಪರಿಶೀಲಿಸಲು ರಚಿಸಿರುವ ಸಮಿತಿಯ ವರದಿಯ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಪರಿಶೀಲಿಸಿ, ಅನುಮೋದಿಸಲಾಯಿತು.

ಮುಂದುವರಿದು, ಈ ಬಗ್ಗೆ ನೀಡುವ ಆದೇಶದಲ್ಲಿ ಲೆಕ್ಕ ಪರಿಶೋಧನಾ ಆಕ್ಷೇಪಣೆಯ ಷರತ್ತನ್ನು ನಮೂದಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ : ಸಾ.ಸ.3:39 (2023)

ವಿಷಯ: ಡಾ. ಯಶಸ್ವಿನಿ ಬಿ., ಸಹಾಯಕ ಪ್ರಾಧ್ಯಾಪಕರು, ಸಮಾಜಕಾರ್ಯ ವಿಭಾಗ ಇವರಿಗೆ ಕರ್ತವ್ಯದ ಸ್ಥಳದಲ್ಲಿ ತೊಂದರೆ ನೀಡುತ್ತಿದ್ದಾರೆಂದು ಸಲ್ಲಿಸಿರುವ ದೂರಿನ ಬಗ್ಗೆ ಆಂತರಿಕ ಪರಿಶೀಲನಾ ಸಮಿತಿಯು ಸಲ್ಲಿಸಿರುವ ವರದಿಗೆ ಡಾ. ಮೋಹನ್ ಎಸ್. ಸಿಂಘೆ, ಸಹ ಪ್ರಾಧ್ಯಾಪಕರು ಸಲ್ಲಿಸಿರುವ ಮೇಲ್ಮನವಿ ಕುರಿತು.

ನಿರ್ಣಯ: ಪ್ರಸ್ತಾವನೆಯ ಬಗ್ಗೆ ಪರಿಶೀಲಿಸಲು ಸಮಿತಿಯನ್ನು ರಚಿಸಲು ನಿರ್ಣಯಿಸಲಾಯಿತು. ಸಮಿತಿಯನ್ನು ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ : ಸಾ.ಸ.3:40 (2023)

ವಿಷಯ: ಶ್ರೀಮತಿ ಜಯಕುಮಾರಿ ಎನ್. ಇವರಿಗೆ ಬೆರಳಚ್ಚುಗಾರ-ವ-ಗುಮಾಸ್ತ ಹುದ್ದೆಯಿಂದ ದ್ವಿತೀಯ ದರ್ಜೆ ಸಹಾಯಕ ಹುದ್ದೆಗೆ ವೃಂದ ಬದಲಾವಣೆಗೊಳಿಸಲು ಅನುಮತಿ ನೀಡುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ : ಸಾ.ಸ.3:41 (2023)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಮತ್ತು Konkani Bhas ani Sanskrit Prathistan, World Konkani Centre, ಶಕ್ತಿನಗರ, ಮಂಗಳೂರು ಇದರೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪ್ರಸ್ತಾವನೆಯ ಅನುಮೋದನೆ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ : ಸಾ.ಸ.3:42(2023)

ವಿಷಯ: CARER – Lund University, Sweden ಜೊತೆ ಜಂಟಿ ಸಂಶೋಧನೆ ಕೈಗೊಳ್ಳುವುದಕ್ಕೆ ಸಂಬಂಧಿಸಿದ ಒಡಂಬಡಿಕೆಯ ಅವಧಿಯನ್ನು ವಿಸ್ತರಿಸುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ : ಸಾ.ಸ.3:43 (2023)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ Intellectual Property Rights (IPR) ಘಟಕವನ್ನು ಸ್ಥಾಪಿಸುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು. ಘಟಕಕ್ಕೆ ಸಂಯೋಜನಾಧಿಕಾರಿಯನ್ನು ನೇಮಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ : ಸಾ.ಸ.3:44 (2023)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯ ಮತ್ತು ಯೆನೆಪೋಯ (Deemed to be University) ದೇರಳಕಟ್ಟೆ, ಮಂಗಳೂರು ಇದರೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪ್ರಸ್ತಾವನೆಯ ಅನುಮೋದನೆ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ : ಸಾ.ಸ.3:45 (2023)

ವಿಷಯ: CARER ಕೇಂದ್ರದ ವಿವಿಧ ಸೌಲಭ್ಯಗಳ ಬಳಕೆಗೆ ಸಂಬಂಧಿಸಿ ಮಾರ್ಗಸೂಚಿ ತಯಾರಿಸಲು ರಚಿಸಿದ ಸಮಿತಿ ಸಭೆಯ ನಡವಳಿಯ ಬಗ್ಗೆ.

ನಿರ್ಣಯ: ದಿನಾಂಕ 23.05.2023ರಂದು ನಡೆದ ಸಮಿತಿ ಸಭೆಯ ನಡವಳಿಯ ಶಿಫಾರಸ್ಸುಗಳನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ : ಸಾ.ಸ.3:46 (2023)

ವಿಷಯ: ಕಾಲೇಜುಗಳ / ವಿದ್ಯಾಸಂಸ್ಥೆಗಳ ತಾತ್ಕಾಲಿಕ ಸಂಯೋಜನೆಯ ಅನುಶಾಸನದ ಪರಿಷ್ಕರಣೆಯ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ : ಸಾ.ಸ.3:47 (2023)

ವಿಷಯ: ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿನ ಪ್ರಭಾರ ಪ್ರಾಂಶುಪಾಲರ ನೇಮಕಾತಿ ಬಗ್ಗೆ.

ನಿರ್ಣಯ: ಮುಂದಿನ ಆದೇಶದವರೆಗೆ ಡಾ. ಅನಸೂಯ ರೈ, ಇವರನ್ನೇ ಪ್ರಭಾರ ಪ್ರಾಂಶುಪಾಲರನ್ನಾಗಿ ಮುಂದುವರಿಸಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ : ಸಾ.ಸ.3:48 (2023)

ವಿಷಯ: ಸೇವಾ ವಯೋನಿವೃತ್ತಿ ದಿನಾಂಕದ ನಂತರದ ಸೇವೆಯನ್ನು ಪರಿಗಣಿಸುವ ಬಗ್ಗೆ.

ನಿರ್ಣಯ: ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಸದರಿಯವರುಗಳು ವಯೋ ನಿವೃತ್ತಿ ದಿನಾಂಕದ ನಂತರ ಸಲ್ಲಿಸಿರುವ ಸೇವಾ ಅವಧಿಗೆ ವೇತನವನ್ನು ಪಾವತಿಸಲು ನಿಯಮಾವಳಿಯಲ್ಲಿ ಅವಕಾಶವಿರುವುದಿಲ್ಲವೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ : ಸಾ.ಸ.3:49 (2023)

ವಿಷಯ: ವಿವಿಧ ಬೋಧಕ / ಇತರ ಶೈಕ್ಷಣಿಕ ಹುದ್ದೆಗಳ ನೇಮಕಾತಿ / ಪದೋನ್ನತಿಗೆ ಸಂಬಂಧಿಸಿ, ಆಯ್ಕೆ ಸಮಿತಿ ರಚಿಸಲು ವಿಷಯ ತಜ್ಞರ ಪಟ್ಟಿಯನ್ನು ಅನುಮೋದಿಸುವ ಬಗ್ಗೆ.

ನಿರ್ಣಯ: ಅನುಮೋದಿಸಲಾಯಿತು.

**ಇತರ ವಿಷಯಗಳು**

1. ಮಂಗಳೂರು ವಿಶ್ವವಿದ್ಯಾನಿಲಯದಿಂದ ವಿದ್ಯಾರ್ಥಿಗಳ ಅಂಕಪಟ್ಟಿಗಳ ನೈಜತೆ ಪರಿಶೀಲನಾ ಶುಲ್ಕವನ್ನು ರೂ.500.00 (ರೂಪಾಯಿ ಐದು ನೂರು ಮಾತ್ರ) (Per Set) ಕ್ಕೆ ನಿಗದಿಪಡಿಸಿ (ಅಂಚೆ ಶುಲ್ಕ ಪ್ರತ್ಯೇಕ), ಈ ಸಿಂಡಿಕೇಟು ಸಭೆಯ ದಿನಾಂಕದಿಂದಲೇ ಅನ್ವಯಿಸುವಂತೆ ಜಾರಿಗೆ ತರಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

2. ಮಂಗಳೂರು ವಿಶ್ವವಿದ್ಯಾನಿಲಯದ ಶಿಕ್ಷಕರು, ಹೊರದೇಶಗಳಲ್ಲಿ ನಡೆಯುವ ಸಭೆ, ಸಮ್ಮೇಳನ, ಕಾರ್ಯಾಗಾರಗಳಲ್ಲಿ ಪತ್ರಿಕೆ ಮಂಡಿಸಲು/ಭಾಗವಹಿಸಲು ವಿಶ್ವವಿದ್ಯಾನಿಲಯದಿಂದ ಅವಶ್ಯಕತೆಯಿದ್ದಲ್ಲಿ ಸಿಂಡಿಕೇಟಿನ ಅನುಮೋದನೆಯನ್ನು ಕಾಯ್ದಿರಿಸಿ ಅನುಮತಿಯನ್ನು ನೀಡಲು ಸಿಂಡಿಕೇಟು ನಿರ್ಣಯಿಸಿತು.

3. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ Double Entry System of book keeping ನ್ನು ಅಳವಡಿಸಲಾಗಿದ್ದು, ಪ್ರಕ್ರಿಯೆಯು ಪ್ರಸ್ತುತ ಪೂರ್ಣಗೊಂಡಿರುವ ಬಗ್ಗೆ ಮಾನ್ಯ ಕುಲಪತಿಗಳು ಸಭೆಯ ಗಮನಕ್ಕೆ ತಂದರು. ಸದರಿ ಪ್ರಕ್ರಿಯೆಯ ಈವರೆಗಿನ ಬೆಳವಣಿಗೆ ಬಗ್ಗೆ ಸವಿಸ್ತಾರವಾಗಿ ವಿವರಿಸಲು ಸಂಸ್ಥೆಯ ಪಾಲುದಾರರಾದ ಶ್ರೀ ವಾಮನ್ ಕಾಮತ್ ಇವರನ್ನು ಸಭೆಗೆ ಆಹ್ವಾನಿಸಲಾಯಿತು. ಶ್ರೀ ವಾಮನ್ ಕಾಮತ್ ಇವರು ಪ್ರಕ್ರಿಯೆಯ ಬಗೆಗಿನ ಸಂಪೂರ್ಣ ಮಾಹಿತಿಯನ್ನು ಸಭೆಗೆ ಪ್ರಸ್ತುತ ಪಡಿಸಿದರು. ಮುಂದುವರಿದು, ದಿನಾಂಕ 31.03.2022ರ Balance Sheet ಕೂಡಾ ಸಿದ್ಧವಾಗಿರುವ ಬಗ್ಗೆ ಸಭೆಗೆ ಮಾಹಿತಿ ನೀಡಿದರು.

   ಸಿಂಡಿಕೇಟು ಸಭೆಯು ಸದರಿಯವರು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಿದ ಸೇವೆಯನ್ನು ಅತ್ಯಂತ ಗೌರವದಿಂದ ಪರಿಗಣಿಸಿಕೊಂಡು, ವಿಶೇಷ ಕೃತಜ್ಞತೆಗಳನ್ನು ಸಲ್ಲಿಸಿತು.

   ರಾಜ್ಯದ ಇತರ ವಿಶ್ವವಿದ್ಯಾನಿಲಯಗಳ ಪೈಕಿ Double Entry System of book keeping ಪ್ರಕ್ರಿಯೆಯನ್ನು ಮಂಗಳೂರು ವಿಶ್ವವಿದ್ಯಾನಿಲಯವು ಪ್ರಪ್ರಥಮವಾಗಿ ಅನುಷ್ಠಾನಗೊಳಿಸಿರುವುದು ಎಂಬುದು ಎಲ್ಲರಿಗೂ ಹೆಮ್ಮೆಯ ವಿಷಯವಾಗಿದೆ.

   ಅಂತಿಮವಾಗಿ ಸಿಂಡಿಕೇಟು ಈ ಕೆಳಗಿನ ನಿರ್ಣಯಗಳನ್ನು ಕೈಗೊಂಡಿತು.

   a. ಸಂಸ್ಥೆಗೆ ಪಾವತಿಗೆ ಬಾಕಿಯಿರುವ ಮೊತ್ತವನ್ನು ಪಾವತಿಸಲು ಕ್ರಮ ಕೈಗೊಳ್ಳುವುದು.
   b. ಮುಂದಿನ ಎರಡು ವರ್ಷಗಳ ಅವಧಿಗೆ ಸದರಿಯವರ ಸೇವೆಯನ್ನು ಬಳಸಿಕೊಳ್ಳಬಹುದೆಂದು ಸಿಂಡಿಕೇಟು ನಿರ್ಣಯಿಸಿತು.
   c. ಈ ಕೆಳಕಂಡ Policies and Guidelines ಗಳನ್ನು ಶೀಘ್ರದಲ್ಲಿ ಅನುಷ್ಠಾನ ಮಾಡಲು ಸದರಿಯವರ ಸೇವೆಯನ್ನು ಬಳಸಿಕೊಳ್ಳಬಹುದೆಂದು ನಿರ್ಣಯಿಸಿತು.

1. Depreciation Policy
2. Capital asset acquisition and maintenance and capitalization policy
3. Information Technology Policy
4. Information Security and Data Secrecy Policy
5. Human Resources Policy
6. Training Policy
7. Policy on Grants and Endowments
8. Policy on award of contracts and work orders
9. Policy on maintenance of records for different divisions – BOS, Examination Wing, Planning & Development etc.
10. Policy on Disclosure in Financial Statements
11. Fraud Risk Management Policy
12. Risk Management & Internal Control Policy
13. Policy on Outsourcing of Services
14. Inspection Policy
15. Grievance Redressal Policy
16. Policy on Physical Security of Assets

4. ವಿಶ್ವವಿದ್ಯಾನಿಲಯದ ಘಟಕ ಕಾಲೇಜಾದ ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿ ನಡೆಸಲಾಗುತ್ತಿರುವ ಬಿ.ಬಿ.ಎ.(ಟಿ.& ಟಿ.) ಕಾರ್ಯಕ್ರಮದ ಬದಲಾಗಿ ಶೈಕ್ಷಣಿಕ ವರ್ಷ 2023-24ನೇ ಸಾಲಿನಿಂದಲೇ ಪದವಿ ಮಟ್ಟದ ಬಿ.ಬಿ.ಎ. ಕಾರ್ಯಕ್ರಮವನ್ನು ವಿಶ್ವವಿದ್ಯಾನಿಲಯ ಕಾಲೇಜು, ಮತ್ತು ವಿಶ್ವವಿದ್ಯಾನಿಲಯ ಸಂಧ್ಯಾ ಕಾಲೇಜು, ಮಂಗಳೂರು ಇಲ್ಲಿ ಪ್ರಾರಂಭಿಸಲು ಸೂಕ್ತ ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

5. "Ordinance Governing the Acts of Indiscipline and Malpractices in the University Examination" ನ್ನು ಪುನರ್‌ಪರಿಶೀಲಿಸಿಕೊಂಡು ಮುಂದಿನ ಮೂರು ತಿಂಗಳ ಒಳಗಾಗಿ ಸಿಂಡಿಕೇಟು ಸಭೆಗೆ ಕಾರ್ಯಸೂಚಿ ಮಂಡಿಸಲು ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. ತತ್ಸಂಬಂಧ ಸಮಿತಿಯನ್ನು ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

6. ಘನತೆವೆತ್ತ ರಾಜ್ಯಪಾಲರ ಕಛೇರಿಯ ನಿರ್ದೇಶನದನುಸಾರ ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ವಿಶೇಷಾಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕರನ್ನು DR ಮತ್ತು AR ಗಳ ಮುಂಭಡ್ತಿ ಪ್ರಕ್ರಿಯೆಗಳು ಮುಗಿದ ಕೂಡಲೆ ಬಿಡುಗಡೆ ಮಾಡಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

7. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಪ್ರವೇಶಾತಿ ಬಯಸುವ ಅಂತರರಾಷ್ಟ್ರೀಯ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಪ್ರಕ್ರಿಯೆಗೆ ನಿಗದಿಪಡಿಸಿರುವ ಶುಲ್ಕಗಳಲ್ಲಿ ಪ್ರಾಯೋಜಕತ್ವ ಹೊಂದಿರುವ ವಿದ್ಯಾರ್ಥಿಗಳಿಗೆ ಈಗಿರುವ ಶುಲ್ಕಗಳನ್ನೇ ನಿಗದಿಪಡಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ವಿಶ್ವವಿದ್ಯಾನಿಲಯದಿಂದ ನಡೆಸಲ್ಪಡುವ ಎಲ್ಲಾ ಕಾರ್ಯಕ್ರಮಗಳಿಗೆ ಪ್ರವೇಶಾತಿ ಬಯಸುವ ವಿದೇಶೀ ವಿದ್ಯಾರ್ಥಿಗಳ ಶುಲ್ಕಗಳಿಗೆ ಸಂಬಂಧಪಟ್ಟಂತೆ, ಪ್ರವೇಶಾತಿ ಶುಲ್ಕಗಳನ್ನು ಹೊರತುಪಡಿಸಿ, ಇತರ ಎಲ್ಲಾ ಶುಲ್ಕಗಳನ್ನು ಭಾರತೀಯ ವಿದ್ಯಾರ್ಥಿಗಳಿಗೆ ನಿಗದಿಪಡಿಸಿರುವ ಶುಲ್ಕಗಳಂತೆಯೇ ವಿಧಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

8. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ತಾತ್ಕಾಲಿಕ ನೆಲೆಯಲ್ಲಿ ನೇಮಕಗೊಂಡು ದಿನಾಂಕ 04.06.2018ರ ಸಿಂಡಿಕೇಟು ನಿರ್ಣಯದನುಸಾರ ಖಾಯಂಮಾತಿಗೊಂಡಿರುವ ನಾಲ್ಕು ಮಂದಿ ವಾಹನ ಚಾಲಕರುಗಳ ವೇತನ ಹಾಗೂ ಇತರೆ ಭತ್ಯೆಗಳನ್ನು ಖಾಯಂಮಾತಿಗೊಂಡ ದಿನಾಂಕದಿಂದಲೇ ನಿಯಮಾನುಸಾರ ಪಾವತಿಸಲು ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

9. ಶ್ರೀ ಸಿದ್ದಲಿಂಗ ಸ್ವಾಮಿ, ಕೆ.ಪಿ., Research Associate, ಸಿ.ಎಸ್.ಇ.ಐ.ಪಿ., ಮಂಗಳೂರು ವಿಶ್ವವಿದ್ಯಾನಿಲಯ ಇವರು ವೇತನ ಹೆಚ್ಚಿಸುವಂತೆ ಸಲ್ಲಿಸಿರುವ ಮನವಿಯನ್ನು ಪರಿಗಣಿಸಿಕೊಂಡು ನಿಯಮಾನುಸಾರ ಸೂಕ್ತ ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

10. ವಿಕಲ ಚೇತನ ಮೀಸಲಾತಿಯಡಿ ಮುಂಭಡ್ತಿಯನ್ನು ನೀಡಲು ಮಾಡಿದ ಮನವಿಯನ್ನು ಪರಿಗಣಿಸಬಹುದೆಂಬುದಾಗಿ ಮಾನ್ಯ ಕುಲಪತಿಗಳು ಸಭೆಗೆ ತಿಳಿಸಿದರು.
ಈ ಬಗ್ಗೆ ನಿಯಮಾನುಸಾರ ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

11. ದಿನಾಂಕ 31.05.2023ರಂದು ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಕಟ್ಟಡದಲ್ಲಿ ಅಳವಡಿಸಿರುವ Lift ನ್ನು ಉದ್ಘಾಟನೆ ಮಾಡಲಿರುವ ವಿಚಾರವನ್ನು ಸಭೆಗೆ ತಿಳಿಸಿದರು.

12. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ಸ್ವಾಮಿ ವಿವೇಕಾನಂದರ ಪುತ್ಥಳಿಯನ್ನು ಶೀಘ್ರದಲ್ಲಿ ಅನಾವರಣ ಮಾಡಲು ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

13. ದಿನಾಂಕ 28.01.2022ರ ಸಿಂಡಿಕೇಟು ನಿರ್ಣಯದಲ್ಲಿ "ಸಹಕಾರಿ ಸಂಘ/ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ವಿಶ್ವವಿದ್ಯಾನಿಲಯದ ಮೂಲಕ ಪರೀಕ್ಷೆ/ಮೌಲ್ಯಮಾಪನ ಕಾರ್ಯವನ್ನು ನಡೆಸಲು ಬೇಡಿಕೆ ಬಂದಾಗ ಕುಲಸಚಿವರು (ಪರೀಕ್ಷಾಂಗ) ಇವರ ಮೂಲಕ ನಡೆಸಲು ನಿರ್ಣಯಿಸಲಾಗಿರುತ್ತದೆ." ಅದರಂತೆ ಸಹಕಾರ ಸಂಘ/ಸಂಸ್ಥೆಗಳಿಗೆ ಸಂಬಂಧಿಸಿದ ಪರೀಕ್ಷಾ ಕಾರ್ಯಗಳನ್ನು ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರು (ಪರೀಕ್ಷಾಂಗ) ಕಛೇರಿಯಿಂದ ವಿಶ್ವವಿದ್ಯಾನಿಲಯದ ಘನತೆ/ಗೌರವಕ್ಕೆ ಧಕ್ಕೆಯಾಗದಂತೆ ವಿಶ್ವವಿದ್ಯಾನಿಲಯದಲ್ಲಿ ನಡೆಸಲು ಸಿಂಡಿಕೇಟು ಅನುಮತಿ ನೀಡಿತು.

14. ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳಲ್ಲಿ ಪ್ರವೇಶಾತಿಗೊಂಡಿರುವ ವಿದ್ಯಾರ್ಥಿಗಳ ಎಲ್ಲಾ ಶುಲ್ಕಗಳು (ಕಾಲೇಜು ಮತ್ತು ವಿಶ್ವವಿದ್ಯಾನಿಲಯ) UUCMS Portal ಮೂಲಕ ವಿಶ್ವವಿದ್ಯಾನಿಲಯದ ಖಾತೆಗೆ ಜಮೆಯಾಗಿದ್ದು, ಸದರಿ ಶುಲ್ಕಗಳಲ್ಲಿ ಕಾಲೇಜುಗಳಿಗೆ ಸಂಬಂಧಿಸಿದ ಶುಲ್ಕಗಳನ್ನು ಸಂಬಂಧಿತ ಕಾಲೇಜುಗಳಿಗೆ ಮರುಪಾವತಿಸಬೇಕೆಂಬುದಾಗಿ ಸಿಂಡಿಕೇಟು ಸದಸ್ಯರಾದ ಶ್ರೀ ರಾಜೇಂದ್ರ ಎಸ್. ನಾಯಕ್, ಪ್ರಾಂಶುಪಾಲರು ಇವರು ಸಿಂಡಿಕೇಟು ಸಭೆಗೆ ಮನವಿ ಮಾಡಿಕೊಂಡರು. ಸದರಿಯವರ ಮನವಿಯನ್ನು ಪರಿಗಣಿಸಿಕೊಂಡು ಕಾಲೇಜುಗಳಿಗೆ ಪಾವತಿಸಬೇಕಾಗಿರುವ ಶುಲ್ಕಗಳನ್ನು ಸಂಬಂಧಿತ ಕಾಲೇಜುಗಳಿಗೆ ಶೀಘ್ರದಲ್ಲಿ ಪಾವತಿಸಲು ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

15. ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ವಿಭಾಗಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಾಧ್ಯಾಪಕರುಗಳಿಗೆ ಹಿರಿಯ ಪ್ರಾಧ್ಯಾಪಕರ ಹುದ್ದೆಯ ಮುಂಭಡ್ತಿಗೆ ಸಂಬಂಧಿಸಿದ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

16. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕೇತರ ಉದ್ಯೋಗಿಗಳ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿ ಅರ್ಹ ಸಿಬ್ಬಂದಿಗಳಿಗೆ ಮುಂಭಡ್ತಿಯನ್ನು ನೀಡಲು ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು

17. ಪ್ರೊ. ಪಿ. ಎಸ್. ಯಡಪಡಿತ್ತಾಯ, ಮಾನ್ಯ ಕುಲಪತಿಗಳು, ಮಂಗಳೂರು ವಿಶ್ವವಿದ್ಯಾನಿಲಯ ಇವರ ಕುಲಪತಿಗಳ ಅಧಿಕಾರವಧಿಯು ದಿನಾಂಕ02.06.2023ಕ್ಕೆ ಕೊನೆಗೊಳ್ಳಲಿದ್ದು, ಈ ಸಿಂಡಿಕೇಟು ಸಭೆಯು ಸದರಿಯವರ ಅವಧಿಯ ಕೊನೆಯ ಸಿಂಡಿಕೇಟು ಸಭೆಯಾದುದರಿಂದ ಅಚ್ಚುಕಟ್ಟಾಗಿ ಸಿಂಡಿಕೇಟು ಸಭೆಗಳನ್ನು ನಿರ್ವಹಿಸಿರುವುದಕ್ಕೆ ಮತ್ತು ತಮ್ಮ ಅಧಿಕಾರದ ಅವಧಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಕೀರ್ತಿಯನ್ನು ವಿಶ್ವದೆಲ್ಲೆಡೆ ಪಸರಿಸಿ, ವಿಶ್ವವಿದ್ಯಾನಿಲಯದ ಆಡಳಿತವನ್ನು ಕೂಡಾ ಅಚ್ಚುಕಟ್ಟಾಗಿ ನಿರ್ವಹಿಸಿರುವುದಕ್ಕೆ ಸಿಂಡಿಕೇಟು ಸದಸ್ಯರಾದ ಪ್ರೊ. ಜಯರಾಜ್ ಅಮೀನ್ ಮತ್ತು ಪ್ರೊ. ಕರುಣಾಕರ್ ಎ. ಕೋಟೆಗಾರ್ ಇವರು ಎಲ್ಲಾ ಸಿಂಡಿಕೇಟು ಸದಸ್ಯರುಗಳ ಪರವಾಗಿ ಮತ್ತು ಹಿಂದಿನ ಸಿಂಡಿಕೇಟು ಸದಸ್ಯರುಗಳ ಪರವಾಗಿ ಮನದಾಳದ ಕೃತಜ್ಞತೆಗಳನ್ನು ಸಲ್ಲಿಸಿದರು. ಮಾನ್ಯ ಕುಲಪತಿಗಳು ಸದಸ್ಯರ ಪ್ರೀತಿ ವಿಶ್ವಾಸಗಳಿಗೆ ತುಂಬುಹೃದಯದ ಕೃತಜ್ಞತೆಗಳನ್ನು ಸಲ್ಲಿಸಿದರು.

ಕುಲಸಚಿವರು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ಸಹಿ/- | ಸಹಿ/- |
| ಕುಲಸಚಿವರು | ಕುಲಪತಿಗಳು. |